ಆ) ಅದಕ್ಕಾಗಿ ನಿಗದಿಪಡಿಸಿದ ಮೊತ್ತ ಎಷ್ಟು;

ಇ) ಯಾವಾಗ ಸ್ಟೇಡಿಯಂ ರಚನಾ ಕಾರ್ಯ ಕಾರ್ಯಗತಗೊಳ್ಳುವುದು?

ಶ್ರೀ ಜಬ್ಬಾರ್ ಖಾನ್ ಹೊನ್ನಳ್ಳಿ (ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು):

ಅ) ಸುರತ್ಕಲ್‌ನಲ್ಲಿ ಅಂತರ್ ರಾಷ್ಟ್ರೀಯ ಸ್ಟೇಡಿಯಂ ನಿರ್ಮಾಣದ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಶ್ರೀ ಜೆ. ಕೃಷ್ಣ ಪಾಲೇಮಾರ್ :– ಮಾನ್ಯ ಅಧ್ಯಕ್ಷರೆ ನಮ್ಮ ಸುರತ್ಕಲ್ ಕ್ಷೇತ್ರ ಅಂದರೆ ಮಂಗಳೂರು ಕ್ಷೇತ್ರಕ್ಕಿಂತಲೂ ಬಹಳ ಪ್ರಭಾವಿ ಕ್ಷೇತ್ರ ಆಗಿದೆ. ಆದ್ದರಿಂದ ಅಂತರ್ ರಾಷ್ಟ್ರೀಯ ಸ್ಟೇಡಿಯಂ ಅನ್ನು ನಿರ್ಮಾಣ ಮಾಡಬೇಕೆಂದು ನಾನು ಒತ್ತಾಯವನ್ನು ಈ ಸಂದರ್ಭದಲ್ಲಿ ಮಾಡುತ್ತಿದ್ದೇನೆ.

ಶ್ರೀ ಜಬ್ಬಾರ್ ಖಾನ್ ಹೊನ್ನಾಳಿ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಯುವಜನ ಸೇವಾ ಸಚಿವರು) :– ಮಾನ್ಯ ಅಧ್ಯಕ್ಷರೆ, ಪ್ರಸ್ತಾವನೆಯನ್ನು ಮಾನ್ಯ ಸದಸ್ಯರು ಕಳುಹಿಸಲಿ ನಾನು ವಿಚಾರಿಸಿ ಪರಿಶೀಲಿಸುತ್ತೇನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ನೀಡಲಾದ ಉತ್ತರಗಳು.

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, ದಿನಾಂಕ 24–01–05ರ 1ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 198 ಪ್ರಶ್ನೆಗಳ ಪೈಕಿ 130 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು :– ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು ಹಾಗೂ ಉತ್ತರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು. (ಅನುಬಂಧ–1)

4. ಸಭೆಯ ಮುಂದಿಡಲಾದ ಕಾಗದ ಪತ್ರಗಳು:

1978ರ ಕರ್ನಾಟಕ ನಾಗರೀಕ ಸೇವಾ ಅಧಿನಿಯಮ 8(3)ರ ಪ್ರಕರಣದ ಮೇರೆಗೆ:–

1. 2001ರ ಕರ್ನಾಟಕ ನಾಗರೀಕ ಸೇವಾ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ)(ಸಾಮಾನ್ಯ) ನಿಯಮಾವಳಿಯ ನಿಯಮ 11ಕ್ಕೆ ತಿದ್ದುಪಡಿ ಮಾಡಿ ದಿನಾಂಕ 28.07.2004 ರಂದು ಹೊರಡಿಸಲಾದ ಡಿಪಿಎಆರ್ 41 ಎಸ್‌ಸಿಆರ್ 2002ನೇ ಸಂಖ್ಯೆಯ ಅಧಿಸೂಚನೆ.

2. 1974ರ ಕರ್ನಾಟಕ ತೋಟಗಾರಿಕೆ ಇಲಾಖೆ (ನೇಮಕಾತಿ) ನಿಯಮಾವಳಿಯ ಅನುಸೂಚಿಗೆ ತಿದ್ದುಪಡಿ ಮಾಡಿ ದಿನಾಂಕ 25.08.04 ರಂದು ಹೊರಡಿಸಲಾದ ಡಿಪಿಎಆರ್ 68 ಎಸ್‌ಆರ್‌ಇ:99ನೇ ಸಂಖ್ಯೆಯ ಅಧಿಸೂಚನೆ.

3. ದಿನಾಂಕ 25.08.2004ರ ಅಧಿಸೂಚನೆ ಸಂಖ್ಯೆ: ಡಿಪಿಎಆರ್:ಎಸ್‌ಆರ್‌ಇ:99ಕ್ಕೆ ತಿದ್ದುಪಡಿ ಮಾಡಿ ದಿನಾಂಕ 29.10.2004ರಂದು ಹೊರಡಿಸಲಾದ ಡಿಪಿಎಆರ್:68:ಎಸ್‌ಆರ್‌ಇ:99ನೇ ಸಂಖ್ಯೆಯ ಅಧಿಸೂಚನೆ.

4. 1974ರ ಕರ್ನಾಟಕ ನಾಗರೀಕ ಸೇವೆಗಳು (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) (3ನೇ ತಿದ್ದುಪಡಿ) ನಿಯಮಾವಳಿಯ ಅನುಸೂಚಿ–1 ಮತ್ತು 2ಕ್ಕೆ ತಿದ್ದುಪಡಿ ಮಾಡಿ ದಿನಾಂಕ